# ನನ್ನಾಸೆ

**೧. ಅಜ್ಞಾನ ತೊಲಗಿಸಲು ಕವಯಿತ್ರಿ ಏನಾಗ ಬಯಸಿದ್ದಾರೆ ?**

ಉ: ಅಜ್ಞಾನ ತೊಲಗಿಸಲು ಕವಯಿತ್ರಿ ವಾಗ್ದೇವಿಯ ಕೈಯಲ್ಲಿಯ ಗ್ರಂಥವಾಗಲು ಬಯಸಿದ್ದಾರೆ.

**೨. ಸದಾ ಚಿಮ್ಮುವ ಚಿಲುಮೆಯಾಗಬೇಕು , ಏಕೆ ?**

ಉ: ದಾಹಗೊಂಡವರ ತನುವ ತಣಿಸಲು ಸದಾ ಚಿಮ್ಮುತ್ತಲಿರುವ ಚಿಲುಮೆಯಾಗಬೇಕು.

**೩. ನನ್ನಾಸೆ ಕವನದಲ್ಲಿ ಕವಯಿತ್ರಿಯವರ ಆಸೆಗಳೇನು ?**

FOR KANNADA

ಉತ್ತರ : ಬೆಳಕು ನೀಡುವ ಬತ್ತಿಯಾಗುವುದು. ಮರವಾಗಿ ಪುಣ್ಯವಂತರಿಗೆ ನೆರಳಾಗಬೇಕು. ದಾಹಗೊಂಡವರ ತನುವ ತಣಿಸುವ ಸದಾ ಚಿಮ್ಮುತ್ತಲಿರುವ ಚಿಲುಮೆಯಾಗಬೇಕು.ಅಳುವ ಕಂದನ ನಗಿಸಲು ಅಮ್ಮನ ಕಂಠದ ಜೋಗುಳವಾಗಬೇಕು. ಮಾನವನ ಅಜ್ಞಾನತೆ ತೊಲಗಿಸಲು ವಾಗ್ದೇವಿಯ ಕೈಯಲ್ಲಿಯ ಗ್ರಂಥವಾಗಬೇಕು. ದಿಕ್ಕಿಲ್ಲದೆ ನರಳಾಡುವ ದೀನರ ಊರುಗೋಲಾಗಬೇಕು. ನೆಲಕ್ಕೆ ಬಿದ್ದು ಹೊರೆಯಾಗುವ ಮುನ್ನ ಅಂತ್ಯ ತನ್ನದಾಗಬೇಕೆಂಬುದು 'ನನ್ನಾಸೆ' ಕವನದಲ್ಲಿ ಕವಯಿತ್ರಿಯವರ ಆಸೆಗಳು.